ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 4/4/20


# ಸರ್ಕಾರಿ ನೌಕರರ ಸಿಎಲ್‌ಗೆ ಮಿತಿ

## ಒಂದು ಬಾರಿಗೆ ಐದು ದಿನಕ್ಕಿಂತ ಹೆಚ್ಚು ರಜೆ ಇಲ್ಲ

ಬೆಂಗಳೂರು: ಸರ್ಕಾರಿ ನೌಕರರಿಗೆ ವಾರ್ಷಿಕ 15 ದಿನಗಳ ಸಾಂದರ್ಭಿಕ ರಜೆಯನ್ನು 10 ದಿನಕ್ಕೆ ಇಳಿಸಿ ಆದೇಶ ಹೊರಡಿಸಲಾಗಿದೆ. ಒಂದು ಬಾರಿಗೆ 5ಕ್ಕಿಂತ ಹೆಚ್ಚು ರಜೆಗಳನ್ನು ಮಂಜೂರು ಮಾಡಬಾರದು ಎಂಬ ನಿರ್ಬಂಧ ವಿಧಿಸಿದೆ. ರಾಜ್ಯ ನಾಗರಿಕ ಸೇವಾ ನಿಯಮಾವಳಿ ಅನ್ವಯ 15 ದಿನಗಳ ಸಾಂದರ್ಭಿಕ ರಜೆ ಜಾರಿಯಲ್ಲಿದ್ದಾಗ, ಒಂದು ಬಾರಿಗೆ ಗರಿಷ್ಠ ಸಾಂದರ್ಭಿಕ ರಜೆಯ ಮಿತಿ 7 ದಿನವಿತ್ತು. ಈಗ 10 ದಿನಗಳಿಗೆ ಇಳಿಸಿರುವ ಹಿನ್ನೆಲೆಯಲ್ಲಿ ಒಂದು ಬಾರಿಗೆ ಪಡೆಯಬಹುದಾದ ಗರಿಷ್ಠ ಸಾಂದರ್ಭಿಕ ರಜೆಯನ್ನು 5 ದಿನಕ್ಕೆ ನಿರ್ಬಂಧಿಸಲಾಗಿದೆ. ಸಾರ್ವತ್ರಿಕ ರಜೆಯೊಂದಿಗೆ ಸಂಯೋಜಿಸಿದಾಗ ಇದನ್ನು 8 ದಿನಗಳಿಗೆ ನಿರ್ಬಂಧಿಸಿ ಅವಕಾಶ ಕಲ್ಪಿಸಲು ನಿರ್ಧರಿಸಲಾಗಿದೆ. ಎಲ್ಲ ಇಲಾಖೆಯ ನೌಕರರಿಗೆ ವಾರ್ಷಿಕ 10 ಸಾಂದರ್ಭಿಕ ರಜೆಗಳನ್ನು ಮಂಜೂರು ಮಾಡಬಹುದು. ಭಾನುವಾರ ಮತ್ತು ರಜಾ ದಿನಗಳನ್ನು ಬಿಟ್ಟು, 5 ದಿನಗಳಿಗಿಂತ ಹೆಚ್ಚು ಸಾಂದರ್ಭಿಕ ರಜೆ ಮಂಜೂರು ಮಾಡುವಂತಿಲ್ಲ. ಅಲ್ಲದೆ, ಇಂಥ ಗೈರು ಹಾಜರಿ ಅವಧಿ 8 ದಿನಗಳನ್ನು ಮೀರಬಾರದು ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ.